## ಇಸ್ರೊ ವಿಜ್ಞಾನಿ ಮೈಲಸ್ವಾಮಿ ಅಣ್ಣಾದೊರೈ

# ಚಂದ್ರನ ದಕ್ಷಿಣ ಧ್ರುವದಲ್ಲಿ ನೀರು!

ಪ್ರಜಾವಾಣಿ ವಾರ್ತೆ

**ಆನೇಕಲ್:** ಚಂದ್ರನ ದಕ್ಷಿಣ ಧ್ರುವದಲ್ಲಿ ನೀರು, ಅನಿಲ ಮತ್ತು ದ್ರವರೂಪದ ಖನಿಜಾಂಶಗಳಿರುವ ಸಾಧ್ಯತೆ ಹೆಚ್ಚಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಸಂಶೋಧನೆ ನಡೆಸಲಾಗುವುದು ಎಂದು ಇಸ್ರೊ ವಿಜ್ಞಾನಿ ಡಾ.ಮೈಲಸ್ವಾಮಿ ಅಣ್ಣಾದೊರೈ ಹೇಳಿದ್ದಾರೆ.

ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಶನಿವಾರ ನಡೆದ ಅಂತರರಾಷ್ಟ್ರೀಯ ಶಾಲೆ, ಕಾಲೇಜುಗಳ ಮುಖ್ಯಸ್ಥರ ಶೃಂಗಸಭೆ ಉದ್ಘಾಟಿಸಿ ಅವರು ಮಾತನಾಡಿದರು.

‘ಇಸ್ರೊದ ಚಂದ್ರಯಾನದ ನಂತರ ಚಂದ್ರನಲ್ಲಿರುವ ವಿವಿಧ ಖನಿಜಾಂಶಗಳ ಬಗ್ಗೆ ಹೆಚ್ಚಿನ ಮಾಹಿತಿ ದೊರೆಯುತ್ತಿದೆ. ಅನಿಲ ಮತ್ತು ದ್ರವರೂಪದ ಖನಿಜಗಳಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ಮುಂಬರುವ ದಿನಗಳಲ್ಲಿ ಚಂದ್ರನಲ್ಲಿರುವ ಖನಿಜಾಂಶಗಳು ಮನುಕುಲದ ಉದ್ಧಾರಕ್ಕೆ ಸದ್ಬಳಕೆ ಆಗಲಿವೆ’ ಎಂದರು.

ಅಲಯನ್ಸ್ ವಿಶ್ವವಿದ್ಯಾಲಯದ ಎಂಜಿನಿಯರಿಂಗ್ ವಿಭಾಗದ ವಿದ್ಯಾರ್ಥಿಗಳೊಂದಿಗೆ ಅವರು ಸಂವಾದ ನಡೆಸಿದರು. ಶೃಂಗಸಭೆಯಲ್ಲಿ ದೇಶ ಮತ್ತು ವಿದೇಶಗಳ ನೂರಕ್ಕೂ ಹೆಚ್ಚು ಕಾಲೇಜುಗಳ ಮುಖ್ಯಸ್ಥರು ಪಾಲ್ಗೊಂಡಿದ್ದರು.

ಅಲಯನ್ಸ್ ವಿಶ್ವವಿದ್ಯಾಲಯದ ಕುಲಪತಿ ಅಭಯ್ ಚೆಬ್ಬಿ, ಸಹ ಉಪಕುಲಪತಿ ಪ್ರೀಸ್ಲಿ ಶಾನ್, ರಿಜಿಸ್ಟ್ರಾರ್ ಜನರಲ್ ಸುರೇಖಾ ಶೆಟ್ಟಿ ಇದ್ದರು.



ಆನೇಕಲ್ ಸಮೀಪದ ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಅಂತರರಾಷ್ಟ್ರೀಯ ಶಾಲಾ ಕಾಲೇಜುಗಳ ಮುಖ್ಯಸ್ಥರ ಶೃಂಗಸಭೆಯಲ್ಲಿ ಇಸ್ರೊ ವಿಜ್ಞಾನಿ ಪದ್ಮಶ್ರೀ ಡಾ.ಮೈಲಸ್ವಾಮಿ ಅಣ್ಣಾದೊರೈ ಮಾತನಾಡಿದರು